1313(693) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) : ಮಾನ್ಯ ವಕ್ಫ್ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಕ್ಫ್ ಇಲಾಖಾವತಿಯಿಂದ ಅಲ್ಪ ಸಂಖ್ಯಾತರ ಜೀವನ ಮಟ್ಟ ಸುಧಾರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಆ) ತುಮಕೂರು ಜಿಲ್ಲೆಯಲ್ಲಿ ಕಾರ್ಯ ಕ್ರಮಗಳ ಅನ್ವಯ ಸಾಧಿಸಿರುವ ಪ್ರಗತಿ ಏನು; ಈ ಬಗ್ಗೆ ಸಂಪೂರ್ಣ ವಿವರಣೆ ನೀಡುವುದು?

ಶ್ರೀ ಜಮೀರ್ ಅಹ್ಮದ್ ಖಾನ್ (ವಕ್ಫ್ ಮತ್ತು ಹಜ್ ಸಚಿವರು) :

ಅ) ವಕ್ಫ್ ಇಲಾಖೆಯ ವತಿಯಿಂದ ನೇರವಾಗಿ ಅಲ್ಪಸಂಖ್ಯಾತರ ಜೀವನ ಮಟ್ಟ ಸುಧಾರಿಸಲು ಸರ್ಕಾರ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ. ಆದರೆ ಕರ್ನಾಟಕ ವಕ್ಫ್ ಮಂಡಳಿ ಆಶ್ರಯದಲ್ಲಿ ಬರತಕ್ಕಂತಹ ವಕ್ಫ್ ಸಂಸ್ಥೆಗಳು ಆ ಸಂಸ್ಥೆಯ ಕಾರ್ಯಕ್ರಮಗಳಂತೆ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ ಜನಾಂಗದವರಿಗೆ ವಿದ್ಯಾರ್ಥಿವೇತನಗಳು, ಸ್ವಂತ ಉದ್ಯೋಗಕ್ಕಾಗಿ ಆರ್ಥಿಕ ಸಹಾಯಧನ, ಆರೋಗ್ಯ ಕಾರ್ಯಕ್ರಮಗಳು ಹಾಗೂ ಇತರೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರದ ಮಟ್ಟದಲ್ಲಿ ಅಗತ್ಯವಿರುವ ಕರ್ನಾಟಕ ರಾಜ್ಯ ವಕ್ಫ್ ಫೌಂಡೇಷನ್ ಫಾರ್ ವುಮೆನ್ ಡೆವಲಪ್‌ಮೆಂಟ್ ವತಿಯಿಂದ ಮುಸ್ಲಿಂ ಬಡ ಮಹಿಳೆಯರಿಗೆ ಸ್ವಂತ ಉದ್ಯೋಗಕ್ಕಾಗಿ ಸಹಾಯ ಧನ ವಿತರಿಸಲಾಗುತ್ತಿದೆ; ಹಾಗೂ ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ.

ಆ) ತುಮಕೂರು ಜಿಲ್ಲೆಯ ಬಡ ಮುಸ್ಲಿಂ ಮಹಿಳೆಯರಿಗೆ ಸ್ವಂತ ಉದ್ಯೋಗ ಪ್ರಾರಂಭಿಸಲು ಕರ್ನಾಟಕ ರಾಜ್ಯ ವಕ್ಫ್ ಫೌಂಡೇಷನ್ ಫಾರ್ ವುಮೆನ್ಸ್ ಡೆವಲಪ್‌ಮೆಂಟ್ ವತಿಯಿಂದ ರೂ. 6.00 ಲಕ್ಷಗಳನ್ನು ವಿತರಿಸಲಾಗಿದೆ; ಹಾಗೂ ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 610 ಮುಸ್ಲಿಂ ವಿದ್ಯಾರ್ಥಿನಿಯರಿಗೆ ರೂ.500 ರಂತೆ ಒಟ್ಟು ರೂ. 3,05,000-00ಗಳನ್ನು ವಿದ್ಯಾರ್ಥಿವೇತನ ಮಂಜೂರು ಮಾಡಿದೆ.

1314(1512) ಶ್ರೀ ಮಾಮನಿ ವಿಶ್ವನಾಥ್ ಕರಬಸಪ್ಪ (ಪರಸಗಡ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಂಚಿನಾಳ ಗ್ರಾಮದಲ್ಲಿ ಆಯುರ್ವೇದ ಆಸ್ಪತ್ರೆಯಿದ್ದು, ಸಾರ್ವಜನಿಕರು ಇದರ ಪ್ರಯೋಜನೆ ಪಡೆಯಲು ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಂಚಿನಾಳ ಗ್ರಾಮದ ಆಯುರ್ವೇದ ಆಸ್ಪತ್ರೆಯ ಎ.ಎಂ.ಪಿ. ವೈದ್ಯರು ನಿವೃತ್ತಿಯಾಗುತ್ತಿರುವುದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಮೇರೆಗೆ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹಂಚಿನಾಳ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಬಂದಿರುವುದಿಲ್ಲ.

ಆ) ಪ್ರಸ್ತಾವನೆ ಬಂದಲ್ಲಿ ಮಾರ್ಗಸೂಚಿ ಪ್ರಕಾರ ಪರಿಶೀಲಿಸಲಾಗುವುದು.

1315(1096) ಶ್ರೀ ನರಸಿಂಹಸ್ವಾಮಿ. ಜೆ (ದೊಡ್ಡಬಳ್ಳಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ನಗರದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ಕರ್ನಾಟಕ ಭೂ ಸೇನಾ ನಿಗಮಕ್ಕೆ ವಹಿಸಲಾಗಿದೆಯೇ;

ಆ) ವಹಿಸಿದಲ್ಲಿ, ಇದರ ಅಂದಾಜು ವೆಚ್ಚವೆಷ್ಟು; ಕಾಮಗಾರಿಯನ್ನು ಯಾವ ದಿನಾಂಕದಿಂದ ಪ್ರಾರಂಭಿಸಲಾಗಿದೆ; ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು;

ಇ) ಇದುವರೆವಿಗೆ ಎಷ್ಟು ಕಾಮಗಾರಿಯನ್ನು ಮಾಡಲಾಗಿದೆ ಹಾಗೂ ಭೂ-ಸೇನಾ ನಿಗಮಕ್ಕೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) :

ಅ) ದೊಡ್ಡಬಳ್ಳಾಪುರ ನಗರದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಿಂದ ಬಾಲಕಿಯರ ವಿದ್ಯಾರ್ಥಿ ನಿಲಯವನ್ನು ನಿರ್ಮಿಸುವಲ್ಲಿ ಕಟ್ಟಡ ನಿರ್ಮಾಣ ಕಾರ್ಯವನ್ನು ಕರ್ನಾಟಕ ಭೂ-ಸೇನಾ ನಿಗಮಕ್ಕೆ ವಹಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖಾ ವತಿಯಿಂದ ಸದರಿ ನಗರದಲ್ಲಿ ಯಾವುದೇ ವಿದ್ಯಾರ್ಥಿ ನಿಲಯ ಕಾರ್ಯ ನಿರ್ವಹಿಸುತ್ತಿಲ್ಲ.

ಆ) ಹಿಂದುಳಿದ ವರ್ಗಗಳ ಇಲಾಖೆಯಿಂದ ನಗರದಲ್ಲಿ ಕಟ್ಟಡ ನಿರ್ಮಾಣ ಕಾರ್ಯಕ್ಕಾಗಿ ರೂ. 44.85 ಲಕ್ಷ ವೆಚ್ಚ ಅಂದಾಜಿಸಲಾಗಿದೆ. ಕಾಮಗಾರಿಯನ್ನು ಆಗಸ್ಟ್ 2003ರಂದು ಪ್ರಾರಂಭಿಸಲಾಗಿದೆ. ಕಟ್ಟಡದ ಕಾರ್ಯವು ಅಂತಿಮ ಹಂತದಲ್ಲಿದ್ದು ಸೆಪ್ಟೆಂಬರ್ 2006ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.